6. ಶಾಸನ ರಚನೆ

I ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಗೊಂದಲ)

ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕ 2015

ಪರ್ಯಾಲೋಚನಾ ಪ್ರಸ್ತಾವ:

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2015ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಪ್ರಸ್ತಾವ ಮಂಡಿಸಲಾಯಿತು.

ಅಧ್ಯಕ್ಷರು:– ಈ ಬಗ್ಗೆ ಸ್ವಲ್ಪ ವಿವರಿಸಿ ಹೇಳಿ.

(ಗೊಂದಲ)

ಶ್ರೀ ಆರ್.ವಿ. ದೇಶಪಾಂಡೆ:– ಸನ್ಮಾನ್ಯ ಅಧ್ಯಕ್ಷರೆ, ಇದರಲ್ಲಿ ಏನೂ change ಇಲ್ಲ. State level Single Window Clearance Committeeಗೆ Chief Secretary ಯವರು chairman ಇದ್ದರು. ಅವರ ಬದಲಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು ಅಧ್ಯಕ್ಷರು ಎಂದು ಮಾಡಲಾಗಿದೆ. ಬಾಕಿ ಏನೂ ತಿದ್ದುಪಡಿ ಇಲ್ಲ. It is only a small amendment sir.

(ಗೊಂದಲ)

ಅಧ್ಯಕ್ಷರು:– O.K. ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2015ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕವನ್ನು ಸಭೆ ಪರಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.

(ಗೊಂದಲ)

ಈಗ ವಿಧೇಯಕವನ್ನು ಖಂಡಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ 2 ಮತ್ತು 3

2 ಮತ್ತು 3ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

(ಗೊಂದಲ)

2 ಮತ್ತು 3ನೇ ಖಂಡಗಳು ವಿಧೇಯಕದ ಅಂಗವಾದವು

ಖಂಡ 1 ಇತ್ಯಾದಿ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ

ಅಧ್ಯಕ್ಷರು:– ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

(ಗೊಂದಲ)

:ಪ್ರಸ್ತಾವದ ಅಂಗೀಕಾರ:

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2015ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

(ಗೊಂದಲ)

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2015ನೇ ಸಾಲಿನ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಗೊಂದಲ)

ಶ್ರೀ ಹೆಚ್.ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):– ಮಾನ್ಯ ಅಧ್ಯಕ್ಷರೆ, ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2015 ಇದರ ಜೊತೆಗೆ ಇರುವ ತಿದ್ದುಪಡಿಯನ್ನು ಸಹಿತ ಪರ್ಯಾಲೋಚನೆ ಮಾಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ನಿನ್ನೆಯ ದಿನ ಈ ಬಿಲ್ಲು ಪರ್ಯಾಲೋಚನೆಗೆ ಬಂದಾಗ Objection ಮಾಡಲಾಗಿತ್ತು. ನಿನ್ನೆಯ ದಿನ ಈ ಮಸೂದೆಯನ್ನು ಮಂಡಿಸುವುದರಿಂದ ವಿಧಾನ ಪರಿಷತ್ತಿನ ಚುನಾವಣೆ ಮೇಲೆ ದುಷ್ಪರಿಣಾಮ ಬೀರುತ್ತದೆ ಎನ್ನುವಂತಹ ಭಾವನೆ ಇತ್ತು. ನಾನು ಎಲ್ಲರೊಂದಿಗೆ ಚರ್ಚೆ ನಡೆಸಿರುವುದಲ್ಲದೆ, ನಮ್ಮ Advocate General ರವರ ಅಭಿಪ್ರಾಯವನ್ನೂ ಸಹ ಪಡೆದುಕೊಂಡಿದ್ದೇನೆ. ಆ ರೀತಿ ಏನೂ ಆಗುವುದಿಲ್ಲ, ಚುನಾವಣೆಯ ಮೇಲೆ ಇದು ಪರಿಣಾಮ ಬೀರುವುದಿಲ್ಲ. ಶಾಸನವನ್ನು ರಚನೆ ಮಾಡುವುದಕ್ಕೆ ಏನೂ ಆತಂಕ ಇಲ್ಲ. ಮಾನ್ಯ ಸಚಿವರೆ, ತಾವು ಬಿಲ್ ಅನ್ನು ಪರ್ಯಾಲೋಚನೆಗೆ ಸೂಚಿಸಬಹುದು.